# ಮುರುಘಾಮಠದಲ್ಲಿ ಸಾಮೂಹಿಕ ಕಲ್ಯಾಣ ಮಹೋತ್ಸವ

**ಚಿತ್ರದುರ್ಗ, ಡಿ. 5 -** ಭಾರತೀಯ ಸಂಸ್ಕøತಿಯನ್ನು ಉಳಿಸಿ ಬೆಳೆಸಿದ ಕೀರ್ತಿ ಗ್ರಾಮೀಣ ಪ್ರದೇಶದ ಜನರಿಗೆ ಸಲ್ಲುತ್ತದೆ. ಬದುಕನ್ನು ಶೃಂಗರಿಸಿಕೊಳ್ಳುವ ಸಂದರ್ಭ ತಂದುಕೊಳ್ಳಬೇಕು. ಬಹಿರಂಗದ ಅಲಂಕಾರ ಕ್ಷಣಿಕವಾದುದು. ಅಂತರಂಗದ ಶೃಂಗಾರ ಮುಖ್ಯ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ಹೇಳಿದರು.

ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಮತ್ತು ಎಸ್.ಜೆ.ಎಂ. ಶಾಂತಿ ಮತ್ತು ಪ್ರಗತಿ ಫೌಂಡೇಶನ್ ಸಹಯೋಗದಲ್ಲಿ ನಡೆದ ಮೂವತ್ತನೇ ವರ್ಷದ ಹನ್ನೆರಡನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶ್ರೀಗಳು, ಪ್ರೇರಣೆ ಉಜ್ವಲವಾದ ಬದುಕನ್ನು ಕಟ್ಟಿಕೊಡುತ್ತದೆ. ಬದುಕನ್ನು ಕಟ್ಟಿಕೊಳ್ಳಲು ಹಣ, ಶ್ರೀಮಂತಿಕೆ ಮುಖ್ಯವಲ್ಲ. ಬಸವಣ್ಣನವರಿಗೆ ಶರಣರು, ಶರಣರ ಪ್ರೇರಣೆ ಬಸವಣ್ಣನವರಿಗಾಯಿತು. ಗುಡ್ಡಾಪುರದ ಶರಣೆ ದಾನಮ್ಮ ಸಾಮೂಹಿಕ ಕಲ್ಯಾಣ ಮಹೋತ್ಸವ ಮಾಡುತ್ತ ಅನ್ನದಾಸೋಹ ನೆರವೇರಿಸಿ ಪ್ರೇರಣೆಯಾಗಿದ್ದಾರೆ. 12ನೇ ಶತಮಾನದ ಬಸವಾದಿ ಪ್ರಮಥರು ನಮಗೆಲ್ಲ ಪ್ರೇರಣೆಯಾಗಿದ್ದಾರೆ ಎಂದರು.

ಕೆಆರ್‌ಐಡಿಎಲ್ ನಿಗಮದ ಅಧ್ಯಕ್ಷ ಎಂ.ರುದ್ರೇಶ್ ಸನ್ಮಾನ ಸ್ವೀಕರಿಸಿ ಮಾತನಾಡುತ್ತ, ಶ್ರೀಗಳವರ ಅನೇಕ ಕಾರ್ಯಕ್ರಮಗಳು ನಮಗೆಲ್ಲ ಪ್ರೇರಣೆಯಾಗಿವೆ. ನಾವೆಲ್ಲ ಎಷ್ಟೇ ದುಡಿದು ಶ್ರೀಮಂತರಾದರು ಇನ್ನೊಬ್ಬರ ಹಸಿವಿಗೆ ಸ್ಪಂದಿಸಬೇಕು. ಕೊರೋನಾ ವೈರಾಣು ನಗರಪ್ರದೇಶಗಳಲ್ಲಿ ಹೆಚ್ಚಾಗಿ ಕಾಣಿಸಿಕೊಂಡು ಸಾವುನೋವುಗಳಾಗಿವೆ. ಹಳ್ಳಿ ಜನರ ಸೇವೆ ಅಮೂಲ್ಯವಾದುದು. ನಾವು ದೇಶದ ರಕ್ಷಣೆಗೆ ಮುಂದಾಗಬೇಕು ಎಂದು ತಿಳಿಸಿದರು.

ಕನಕಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಗನ್ನಾಥ ವೇದಿಕೆಯಲ್ಲಿದ್ದರು. ಎಸ್.ಜೆ.ಎಂ. ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ, ಕೆಇಬಿ ಷಣ್ಮುಖಪ್ಪ, ಎಂ.ಟಿ. ಮಲ್ಲಿಕಾರ್ಜುನಸ್ವಾಮಿ, ಪೈಲ್ವಾನ್ ತಿಪ್ಪೇಸ್ವಾಮಿ, ಪಿ.ವೀರೇಂದ್ರಕುಮಾರ್, ಎನ್.ತಿಪ್ಪಣ್ಣ, ಗುತ್ತಿನಾಡು ಪ್ರಕಾಶ್ ಮೊದಲಾದವರಿದ್ದರು. ಇದೇ ಸಂದರ್ಭದಲ್ಲಿ 2ಜೊತೆ ಅಂತರ್ಜಾತಿ ಸೇರಿದಂತೆ 12ಜೋಡಿಗಳ ಮದುವೆ ನೆರವೇರಿತು. ಜಮುರಾ ಕಲಾವಿದರು ಪ್ರಾರ್ಥಿಸಿದರು. ವೀರಭದ್ರಪ್ಪ ಸ್ವಾಗತಿಸಿದರು. ಜ್ಞಾನಮೂರ್ತಿ ನಿರೂಪಿಸಿದರು.







